# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **175**

ಸದಸ್ಯರ ಹೆಸರು : ಶ್ರೀ ಬಸನ ಗೌಡ ಬಾದರ್ಲಿ (ವಿಧಾನ ಸಭಾ ಕ್ಷೇತ್ರ)

ಉತ್ತರಿಸುವ ದಿನಾಂಕ : **09-12-2025**

ಉತ್ತರಿಸುವ ಸಚಿವರು : ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರದಿಂದ ರಾಜ್ಯದ ಜನರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವುದನ್ನು ಪ್ರೋತ್ಸಾಹಿಸುವ ಹಿತದೃಷ್ಟಿಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ; (ವಿವರ ನೀಡುವುದು ) | ರಾಜ್ಯ ಸರ್ಕಾರದಿಂದ ರಾಜ್ಯದ ಜನರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವುದನ್ನು ಪ್ರೋತ್ಸಾಹಿಸುವ ಹಿತದೃಷ್ಟಿಯಿಂದ ರಾಜ್ಯದಲ್ಲಿ ಸಮಗ್ರ ಕೈಗಾರಿಕಾ ಅಭಿವೃದ್ಧಿಗಾಗಿ ಸರ್ಕಾರವು ದಿನಾಂಕ: 08/02/2025 ರಂದು ಕೈಗಾರಿಕಾ ನೀತಿ 2025-30 ರನ್ನು ಜಾರಿಗೆ ತಂದಿರುತ್ತದೆ. ಸದರಿ ನೀತಿಯಡಿ ಈ ಕೆಳಕಂಡಂತೆ ವಿವಿಧ ರೀತಿಯ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ನೀಡಿ ಕೈಗಾರಿಕೆಗಳನ್ನು ಉತ್ತೇಜಿಸಲಾಗುತ್ತಿದೆ.<br><br>1. ಬಂಡವಾಳ ಹೂಡಿಕೆ ಸಹಾಯಧನ / ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.<br>2. ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ವಿನಾಯಿತಿ.<br>3. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>4. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ.<br>5. ವಿದ್ಯುತ್ ಚ್ಛಕ್ತಿ ಸಹಾಯಧನ.<br>6. ಕೈಗಾರಿಕಾ ವಸತಿ ನಿಲಯ ಸಹಾಯಧನ.<br>7. ತಂತ್ರಜ್ಞಾನ ಅಳವಡಿಕೆ & ನವೋನ್ವೇಶಣೆ ಉತ್ತೇಜನ.<br>8. ರಫ್ತು ಘಟಕಗಳಿಗೆ ಪ್ರೋತ್ಸಾಹ.<br>9. ಸುಸ್ಥಿರತೆ ಮತ್ತು ಜವಾಬ್ದಾರಿಯುತ ಕೈಗಾರಿಕೀರಣ ಉತ್ತೇಜನ.<br>10. ಲಾಜಿಸ್ಟಿಕ್ಸ್ ಮತ್ತು ಉಗ್ರಾಣ ಸಹಾಯಧನ.<br><br>ನಿರುದ್ಯೋಗಿ ಯುವಕ ಯುವತಿಯವರಿಗೆ ಸಣ್ಣ ಕೈಗಾರಿಕೆ ಸ್ಥಾಪಿಸಲು ಕೇಂದ್ರ ಸರ್ಕಾರದ ವತಿಯಿಂದ ಪಿಎಂಇಜಿಪಿ ಯೋಜನೆಯು ಜಾರಿಯಲ್ಲಿರುತ್ತದೆ. |

<table>
<tr>
<td></td>
<td></td>
<td>ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ ಯೋಜನೆ (ಪಿಎಂಇಜಿಪಿ),<br>
<ul>
<li>2008-09ನೇ ಸಾಲಿನಿಂದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮವನ್ನು (PMEGP) ಜಾರಿಗೊಳಿಸಲಾಗುತ್ತಿದೆ. ಸ್ಥಳೀಯ ಸಂಪನ್ಮೂಲಗಳ ಆಧಾರದ ಮೇಲೆ ಉತ್ಪಾದನೆ ಮತ್ತು ಸೇವಾ ವಲಯಗಳ ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಉದ್ಯೋಗವನ್ನು ಒದಗಿಸುವುದು ಯೋಜನೆಯ ಉದ್ದೇಶವಾಗಿದೆ.</li>
<li>ಈ ಯೋಜನೆಯಡಿ ವಿವಿಧ ಬ್ಯಾಂಕ್‌ಗಳ ಮೂಲಕ ಉತ್ಪಾದನಾ ವಲಯಕ್ಕೆ ರೂ. 50.00 ಲಕ್ಷ ಮತ್ತು ಸೇವಾ ವಲಯಕ್ಕೆ ರೂ. 20.00 ಲಕ್ಷದವರೆಗೆ ಸಾಲವನ್ನು ವಿಸ್ತರಿಸಲಾಗಿದೆ. ಯೋಜನೆಯಡಿಯಲ್ಲಿ ಲಭ್ಯವಿರುವ ಮಾರ್ಜಿನ್ ಹಣದ ವಿವರಗಳು ಕೆಳಕಂಡಂತಿವೆ:</li>
</ul>
<table>
<tr><th rowspan="2">ವರ್ಗ</th><th colspan="2">ಅಂಚು ಹಣ</th></tr>
<tr><th>ನಗರ</th><th>ಗ್ರಾಮೀಣ</th></tr>
<tr><td>ಸಾಮಾನ್ಯವರ್ಗದವರಿಗೆ</td><td>15%</td><td>25%</td></tr>
<tr><td>ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಮಾಜಿ ಸೈನಿಕ, ಅಂಗವಿಕಲ, ಮಹಿಳೆ</td><td>25%</td><td>35%</td></tr>
</table>
</td>
</tr>
<tr>
<td>(ಆ)</td>
<td>ಪ್ರಸಕ್ತ ಸಾಲಿನಲ್ಲಿ ಸಿಂಧನೂರು ತಾಲೂಕಿನಲ್ಲಿ ಸಣ್ಣ/ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದಿಂದ ಎಷ್ಟು ಜನರಿಗೆ ಪ್ರೋತ್ಸಾಹ ಧನ ಮಂಜೂರು ಮಾಡಲಾಗಿದೆ; (ವಿವರ ನೀಡುವುದು )</td>
<td>ಪ್ರಸಕ್ತ ಸಾಲಿನಲ್ಲಿ ಸಿಂಧನೂರು ತಾಲೂಕಿನಲ್ಲಿ ಸಣ್ಣ/ಗುಡಿ ಕೈಗಾರಿಕೆಗಳ ಸ್ಥಾಪನೆಗಾಗಿ ಪ್ರಸ್ತಾವನೆಗಳು ಇಲ್ಲದ ಪ್ರಯುಕ್ತ ಪ್ರೋತ್ಸಾಹ ಧನ ಮಂಜೂರು ಮಾಡಿರುವುದಿಲ್ಲ.</td>
</tr>
<tr>
<td>(ಇ)</td>
<td>ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರುದ್ಯೋಗಿ ಯುವಕ/ಯುವತಿಯರು ಹೆಚ್ಚು ಸಂಖ್ಯೆಯಲ್ಲಿದ್ದು ಉದ್ಯೋಗ ಕಲ್ಪಿಸುವ ಹಿತದೃಷ್ಟಿಯಿಂದ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ತಾಲ್ಲೂಕಿಗೆ ಹೆಚ್ಚು ಪ್ರೋತ್ಸಾಹ ಧನ ಮಂಜೂರು ಮಾಡುವ ವಿಶೇಷ</td>
<td>ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರುದ್ಯೋಗಿ ಯುವಕ/ಯುವತಿಯರು ಹೆಚ್ಚು ಸಂಖ್ಯೆಯಲ್ಲಿದ್ದು ಉದ್ಯೋಗ ಕಲ್ಪಿಸುವ ಹಿತದೃಷ್ಟಿಯಿಂದ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ತಾಲ್ಲೂಕಿಗೆ ಹೆಚ್ಚು ಪ್ರೋತ್ಸಾಹಧನ ಮಂಜೂರು ಮಾಡುವ ವಿಶೇಷ ಪ್ಯಾಕೇಜ್ ಯೋಜನೆ ಯಾವುದು ಇರುವುದಿಲ್ಲ, ಆದರೆ, ಕಲ್ಯಾಣ ಕರ್ನಾಟಕದ ಭಾಗದಲ್ಲಿನ ಜಿಲ್ಲೆಗಳ ಎಲ್ಲಾ</td>
</tr>
</table>

| | | |
|---|---|---|
| | ಪ್ಯಾಕೇಜ್ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ತಾಲ್ಲೂಕುಗಳನ್ನು ಕೈಗಾರಿಕಾ ನೀತಿ 2025-30 ರಡಿ ಅತಿ ಹೆಚ್ಚು ಹಿಂದುಳಿದ "ವಲಯ-1"ರಲ್ಲಿ ವರ್ಗೀಕರಿಸಲಾಗಿದ್ದು, ಅದರನ್ವಯ ಹೆಚ್ಚಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಒದಗಿಸಲು ಕ್ರಮ ಕೈಗೊಂಡಿದೆ. |
| (ಈ) | ಇದ್ದಲ್ಲಿ ಅದು ಯಾವ ಹಂತದಲ್ಲಿದೆ? (ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ |

**ಸಿಐ 157 ಎಸ್‌ಎಸ್‌ಐ 2025**

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು.